ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2015–16 : ನವಂಬರ್ 9, 2015

# ದೀಪಾವಳಿ : ರಾಜ್ಯದ ಜನತೆಗೆ ಮುಖ್ಯಮಂತ್ರಿ ಶುಭಾಶಯ




ಬೆಂಗಳೂರು, ನವಂಬರ್ 9 :

ಬೆಳಕಿನ ಹಬ್ಬ ದೀಪಾವಳಿಯ ಸುಸಂದರ್ಭದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ರಾಜ್ಯದ ಜನತೆಗೆ ಶುಭ ಹಾರೈಸಿದ್ದಾರೆ.

ಈ ಬಾರಿಯ ದೀಪಾವಳಿಯಲ್ಲಿ ಪಟಾಕಿಗಳ ಹಾವಳಿ ಬೇಡ ಎಂದು ಪಣತೊಡೋಣ. ಮಕ್ಕಳು, ಮಹಿಳೆಯರು, ವಿಶೇಷವಾಗಿ ಗರ್ಭಿಣಿ ಮಹಿಳೆಯರು, ಹಾಗೂ ವಯೋ ವೃದ್ಧರು, ಅಷ್ಟೇ ಏಕೆ ? ಪ್ರಾಣಿ – ಪಕ್ಷಿಗಳನ್ನು ನೆಮ್ಮದಿಯಿಂದ ಬದುಕಲು ಅವಕಾಶ ಮಾಡಿಕೊಡೋಣ. ಪಟಾಕಿಗಳ ಬದಲು ನಮ್ಮ ಮಕ್ಕಳಿಗೆ ಪುಸ್ತಕಗಳನ್ನು ಕೊಡಿಸಿ, ಅವರ ಮನದಲ್ಲಿ ಜ್ಞಾನದ ದೀಪವನ್ನು ಬೆಳಗಿಸೋಣ, ಶಬ್ದ–ರಹಿತ ದೀಪಾವಳಿಯನ್ನು ಆಚರಿಸಿ ಪರಿಶುದ್ಧ ಪರಿಸರವನ್ನು ಕಾಯ್ದುಕೊಳ್ಳುವುದರೊಂದಿಗೆ ಸಂಭ್ರಮದ ದೀಪಾವಳಿಯನ್ನು ಆಚರಿಸೋಣ ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

************

ಡಿ ಪಿ ಎಂ